# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **276** |
| ಉತ್ತರಿಸಬೇಕಾದ ದಿನಾಂಕ | : | 14.09.2022 |
| ಉತ್ತರಿಸಬೇಕಾದ ಸಚಿವರು | : | ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯದಲ್ಲಿ ವಸತಿ ಯೋಜನೆ ಮೂಲಕ ಮನೆ ನೀಡಲು ಅನುಸರಿಸುತ್ತಿರುವ ಮಾನದಂಡಗಳು ಯಾವುವು ; ಆಯ್ಕೆ ಪ್ರಕ್ರಿಯೆ ಹೇಗೆ ನಡೆಯುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು) | ವಿವಿಧ ವಸತಿ ಯೋಜನೆಗಳಡಿ ವಸತಿ ಸೌಲಭ್ಯವನ್ನು ಪಡೆಯಲು ನಿಗಧಿಪಡಿಸಿರುವ ಮಾನದಂಡಗಳ ವಿವರ ಅನುಬಂಧದಲ್ಲಿ ಒದಗಿಸಲಾಗಿದೆ.<br><br>ಫಲಾನುಭವಿಗಳ ಆಯ್ಕೆಯನ್ನು ಗ್ರಾಮೀಣ ಪ್ರದೇಶದಲ್ಲಿ ಗ್ರಾಮ ಸಭೆ ಮೂಲಕ ಮತ್ತು ನಗರ ಪ್ರದೇಶದಲ್ಲಿ ಮಾನ್ಯ ಶಾಸಕರ ಅಧ್ಯಕ್ಷತೆಯ ನಗರ ಆಶ್ರಯ ಸಮಿತಿ ಮೂಲಕ ಆಯ್ಕೆ ಮಾಡಲಾಗುತ್ತದೆ. ನಿಗದಿ ಪಡಿಸಿದ ಗುರಿಗೆ ವಸತಿರಹಿತರ ಸಂಖ್ಯೆ ಹೆಚ್ಚಾಗಿದ್ದಾಗ ಅರ್ಹ ಫಲಾನುಭವಿಗಳನ್ನು ಲಾಟರಿ ಮೂಲಕ ಆಯ್ಕೆ ಮಾಡಬೇಕಿರುತ್ತದೆ, ಹೀಗೆ ಆಯ್ಕೆಯಾದ ಫಲಾನುಭವಿಳ ಪಟ್ಟಿಯನ್ನು Online ಮೂಲಕ GP ಯಿಂದ TP/ULB ಯಿಂದ ZP/DCಗೆ ಮತ್ತು ಅಂತಿಮ ಅನುಮೋದನೆಗೆ ನಿಗಮವನ್ನು ಸಲ್ಲಿಸಬೇಕಿರುತ್ತದೆ. ಹೀಗೆ ಸಲ್ಲಿಸಿದ ಫಲಾನುಭವಿಗಳ ಪಟ್ಟಿಗೆ ಅನುಮೋದನೆಯಾದ ನಂತರ ಕಾಮಗಾರಿ ಆದೇಶ ವಿತರಿಸಲಾಗುತ್ತದೆ. |
| ಆ) | ಸರ್ಕಾರವು ಬಿ.ಪಿ.ಎಲ್ ಆದಾಯ ಮಿತಿಯನ್ನು ವಾರ್ಷಿಕ ರೂಪಾಯಿ 1.20 ಲಕ್ಷಕ್ಕಿಂತ ಕಡಿಮೆ ನಿಗದಿಪಡಿಸಿದ್ದು, ವಸತಿ ನಿಗಮದ ಮೂಲಕ ತಂತ್ರಾಂಶದಲ್ಲಿ ದಾಖಲಿಸುವಾಗ ಬಿ.ಪಿ.ಎಲ್ ಪಡಿತರ ಚೀಟಿಯನ್ನು ಮಾತ್ರ ಪರಿಗಣಿಸುತ್ತಿದ್ದು, ಹಲವು ಅರ್ಹ ಫಲಾನುಭವಿಗಳು ವಸತಿ ಯೋಜನೆಯಿಂದ ಹೊರಗುಳಿಯುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ಒದಗಿಸುವುದು) | ವಸತಿ ಯೋಜನೆಗಳಡಿ ವಸತಿ ಸೌಕರ್ಯವನ್ನು ಪಡೆಯಲು ಕುಟುಂಬ ಪಡಿತರ ಚೀಟಿ ಹೊಂದಿರುವುದನ್ನು ಕಡ್ಡಾಯಗೊಳಿಸಲಾಗಿರುತ್ತದೆ. ಇದರ ಉದ್ದೇಶ ಗಂಡ/ಹೆಂಡತಿ/ ತಂದೆ/ತಾಯಿ ಹೆಸರಿನಲ್ಲಿ ಒಂದಕ್ಕಿಂತ ಹೆಚ್ಚು ಮನೆ ಸೌಕರ್ಯ ಪಡೆಯುವುದನ್ನು ತಡೆಗಟ್ಟುವುದಾಗಿರುತ್ತದೆ.<br><br>ಈ ಹಿಂದೆ ವಸತಿ ಸೌಕರ್ಯ ಪಡೆಯಲು ವಾರ್ಷಿಕ ಆದಾಯದ ಮಿತಿ ಗ್ರಾಮೀಣ ಪ್ರದೇಶದಲ್ಲಿ ರೂ.32000/-ಗಳನ್ನು ಹಾಗೂ ನಗರ ಪ್ರದೇಶದಲ್ಲಿ ರೂ.87600/-ಗಳನ್ನು ನಿಗದಿಪಡಿಸಲಾಗಿತ್ತು. ಸದರಿ ಆದಾಯದ ಮಿತಿಯನ್ನು ಗ್ರಾಮೀಣ ಪ್ರದೇಶದಲ್ಲಿ ರೂ.1.20 ಲಕ್ಷಕ್ಕೆ ಹಾಗೂ ನಗರ ಪ್ರದೇಶದಲ್ಲಿ ರೂ.2.00 ಲಕ್ಷಕ್ಕೆ ಹೆಚ್ಚಿಸಲಾಗಿರುತ್ತದೆ. ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಆವಾಸ್ ಯೋಜನೆ(ನಗರ)ಯಡಿ ಆದಾಯ ಮಿತಿಯನ್ನು ರೂ.3.00 ಲಕ್ಷಗಳಿಗೆ ನಿಗದಿಪಡಿಸಲಾಗಿದೆ. |
| ಇ) | ರಾಜ್ಯದ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಮನೆ ನೀಡುವ ಯೋಜನೆಯನ್ನು ಜಾರಿ | ವಸತಿ ಯೋಜನೆಗಳನ್ನು ಗ್ರಾಮೀಣ ಪ್ರದೇಶದಲ್ಲಿ ಗ್ರಾಮ ಪಂಚಾಯತ್/ ತಾಲ್ಲೂಕು ಪಂಚಾಯತ್/ಜಿಲ್ಲಾ ಪಂಚಾಯತ್ ಮೂಲಕ ಹಾಗೂ ನಗರ ಪ್ರದೇಶದಲ್ಲಿ ನಗರ ಸ್ಥಳೀಯ ಸಂಸ್ಥೆ/ ಜಿಲ್ಲಾಧಿಕಾರಿಗಳ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. |

| | | |
|---|---|---|
| | ಮಾಡುವಾಗ ಮತ್ತು ಅನುಷ್ಠಾನಿಸುವಾಗ ವಿವಿಧ ಇಲಾಖೆಗಳಾದ ಪಂಚಾಯಿತಿ ರಾಜ್ ಇಲಾಖೆ, ವಸತಿ ನಿಗಮ, ಕಂದಾಯ , ನೊಂದಾಣಿ, ಬ್ಯಾಂಕ್ ಇತ್ಯಾದಿಗಳ ನಿಯಮಗಳಲ್ಲಿ ವೈರುದ್ಯಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರಿಂದ ವಸತಿ ಯೋಜನೆ ಕುಂಠಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವುಗಳನ್ನು ಸರಿಪಡಿಸಲು ಸರ್ಕಾರ ಕೈಗೊಳ್ಳಲಾದ ಕ್ರಮಗಳೇನು ? | ಫಲಾನುಭವಿಗಳನ್ನು ಗ್ರಾಮೀಣ ಪ್ರದೇಶದ ಗ್ರಾಮ ಪಂಚಾಯತ್ ಮಟ್ಟದಲ್ಲಿ ಗ್ರಾಮ ಸಭೆಯ ಮೂಲಕ ಹಾಗೂ ನಗರ ಪ್ರದೇಶದಲ್ಲಿ ಮಾನ್ಯ ಶಾಸಕರ ಅಧ್ಯಕ್ಷತೆಯ ನಗರ ಆಶ್ರಯ ಸಮಿತಿ ಮೂಲಕ ಆಶ್ರಯ ಸಮಿತಿಯ ಮೂಲಕ ಆಯ್ಕೆಗೊಳಿಸಲಾಗುತ್ತಿದೆ.<br><br>ಸರ್ಕಾರವು ದಿನಾಂಕ:28.01.2022 ರಲ್ಲಿ ಆದೇಶಲ್ಲಿ ವಿವಿಧ ವಸತಿ ಯೋಜನೆಗಳಡಿ ಸ್ವಂತ ನಿವೇಶನದಲ್ಲಿ ಸಹಾಯಧನ ಪಡೆದು ಮನೆ ನಿರ್ಮಿಸಿಕೊಂಡಿರುವ/ನಿರ್ಮಿಸಿಕೊಳ್ಳುವ ಫಲಾನುಭವಿಗಳ ಆಸ್ತಿ/ನಿವೇಶನವನ್ನು ಅಡಮಾನ ನೋಂದಣಿಯಿಂದ ಸಂಪೂರ್ಣವಾಗಿ ರದ್ದುಪಡಿಸಲಾಗಿದೆ.<br><br>ವಿವಿಧ ವಸತಿ ಯೋಜನೆಗಳಡಿ ಆಯ್ಕೆಯಾದ ಫಲಾನುಭವಿಗಳಿಗೆ ಭೌತಿಕ ಪ್ರಗತಿಗೆ ಅನುಗುಣವಾಗಿ ಫಲಾನುಭವಿಯ ಆಧಾರ್ ಜೋಡಣೆಯಾದ ಬ್ಯಾಂಕ್ ಖಾತೆಗೆ ನೇರವಾಗಿ ಅನುದಾನ ಬಿಡುಗಡಗೊಳಿಸಲಾಗುತ್ತಿದೆ. ಮುಂದುವರೆದು ಫಲಾನುಭವಿಯು ಮನೆ ನಿರ್ಮಿಸಲು ಇನ್ನೂ ಹೆಚ್ಚಿನ ಅನುದಾನದ ಅವಶ್ಯವಿದ್ದಲ್ಲಿ ಸ್ಥಳೀಯವಾಗಿ ಬ್ಯಾಂಕ್ ಸಾಲ ಸೌಲಭ್ಯವನ್ನು ಪಡೆಯಲು ಯಾವುದೇ ಸಮಸ್ಯೆ ಇರುವುದಿಲ್ಲ.<br><br>ಸರ್ಕಾರವು ವಸತಿ ಯೋಜನೆಗಳ ಸುಗಮ ಅನುಷ್ಠಾನಕ್ಕೆ ಕಾಲ ಕಾಲಕ್ಕೆ ಹಲವಾರು ಆದೇಶ/ಸುತ್ತೋಲೆ ಹೊರಡಿಸಿ ಸರಳೀಕರಣಗೊಳಿಸಿ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ :ವಇ 364 ಹೆಚ್‌ಎಎಂ 2022

(ವಿ. ಸೋಮಣ್ಣ)
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು

# ಅನುಬಂಧ

ವಿವಿಧ ವಸತಿ ಯೋಜನೆಗಳಡಿ ವಸತಿ ಸೌಲಭ್ಯವನ್ನು ಪಡೆಯಲು ನಿಗಧಿಪಡಿಸಿರುವ ಮಾನದಂಡಗಳ ವಿವರ ಅನುಬಂಧದಲ್ಲಿ ಒದಗಿಸಲಾಗಿದೆ.

- ಅರ್ಜಿದಾರರು ಕಡ್ಡಾಯವಾಗಿ ಮಹಿಳೆಯಾಗಿರಬೇಕು (ವಿವಾಹಿತ ಅಥವಾ ಏಕ ಮಹಿಳಾ ಒಡೆತನದ ಗೃಹಿಣಿ). ಮಾಜಿ ಯೋಧರು, ವಿಧುರರು, ಅಂಗವಿಕಲರು ಮತ್ತು ಹಿರಿಯ ನಾಗರೀಕರಾಗಿದ್ದಲ್ಲಿ ಪುರುಷರು ಸಹಾ ಅರ್ಹರಾಗಿರುತ್ತಾರೆ.
- ಅರ್ಜಿದಾರರ ಕುಂಟುಂಬವು ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಹಿಂದುಳಿದಿದ್ದು, ವಾರ್ಷಿಕ ಆದಾಯವು ಗ್ರಾಮೀಣ ಪ್ರದೇಶದವರಾಗಿದ್ದಲ್ಲಿ ರೂ.1,20,000/- ಕ್ಕಿಂತ ಕಡಿಮೆ ಹಾಗೂ ನಗರ ಪ್ರದೇಶದಲ್ಲಿ ರೂ.2 ಲಕ್ಷ ಕ್ಕಿಂತ ಕಡಿಮೆ ಇರಬೇಕು.
- ಅರ್ಜಿದಾರರ ಕುಟುಂಬವು ವಸತಿ ರಹಿತರಾಗಿದ್ದು, ಅರ್ಜಿದಾರರು ಅಥವಾ ಕುಟುಂಬದ ಯಾವುದೇ ಸದ್ಯಸರ ಹೆಸರಿನಲ್ಲಿ ಕರ್ನಾಟಕದ ಯಾವುದೇ ಭಾಗದಲ್ಲಿ ಸ್ವಂತ ಮನೆಯನ್ನು ಹೊಂದಿರಬಾರದು. ಶಿಥಿಲಗೊಂಡ ಮನೆ ಅಥವಾ ಗುಡಿಸಲಿನಲ್ಲಿ ವಾಸಿಸುತ್ತಿರುವವರು ಅರ್ಹರಾಗಿರುತ್ತಾರೆ.
- ಅರ್ಜಿದಾರರು ಸ್ವಂತ ನಿವೇಶನ ಹೊಂದಿದ್ದು ನಿವೇಶನಕ್ಕೆ ಸಂಬಂಧಿಸಿದಂತೆ ಖಾತೆ ಹೊಂದಿರಬೇಕು (ಪಾರಂಪರಿಕ ಅರಣ್ಯ ಹಕ್ಕುಗಳ ಕಾಯ್ದೆಯನ್ವಯ ಜಿಲ್ಲಾ ಸಮಿತಿಯಿಂದ ನೀಡಲಾದ ಹಕ್ಕುಪತ್ರ ಪಡೆದಿದ್ದಲ್ಲಿ ವಸತಿ ಸೌಕರ್ಯ ಪಡೆಯಲು ಪರಿಗಣಿಸಬಹುದಾಗಿದೆ.)
- ಬೇರೆ ಯಾವುದೇ ಯೋಜನೆ/ಇಲಾಖೆಯಿಂದ ಈಗಾಗಲೇ ವಸತಿ ಸೌಲಭ್ಯ ಪಡೆದಿರಬಾರದು.
- ಪ್ರಧಾನ ಮಂತ್ರಿ ಆವಾಸ್ ಯೋಜನೆ(ಗ್ರಾ)ಯಡಿ ವಸತಿ ಸೌಲಭ್ಯ ಪಡೆಯಲು 2018 ರ ವಸತಿ/ನಿವೇಶನ ರಹಿತರ ಪಟ್ಟಿಯಲ್ಲಿ ಹೆಸರು ಸೇರಿರಬೇಕು.

ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) ಯಡಿ ಫಲಾನುಭವಿಗಳನ್ನು ಗುರುತಿಸಲು/ಆಯ್ಕೆ ಮಾಡುವ ಮಾನದಂಡ ಕೆಳಕಂಡಂತಿದೆ.

- ದೇಶದಾದ್ಯಂತ ಅವನ/ಅವಳ ಹೆಸರಿನಲ್ಲಿ ಯಾವುದೇ ಮನೆ ಇರಬಾರದು.
- ವಾರ್ಷಿಕ ಆದಾಯ 3 ಲಕ್ಷಕ್ಕಿಂತ ಕಡಿಮೆ ಇರಬೇಕು.
- ಇತರೇ ವಸತಿ ಯೋಜನೆಗಳಲ್ಲಿ ಈಗಾಗಲೇ ಸಹಾಯಧನ ಪಡೆದಿರಬಾರದು.